# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** **ಶ್ರೀ ಮಂಜುನಾಥ (ಪ್ರಸ್ತುತ ತಿಪಟೂರು ತಾಲ್ಲೂಕಿನ ಹಿಂಡಿಸಕೆರೆ) ಅಮ್ಮನಘಟ್ಟ ಗ್ರಾಮ ಪಂಚಾಯಿತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.**

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ–1600/2016/ಎಆರ್ಎಲ್ಓ 2, ದಿನಾಂಕ: 05–05–2017.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ: ಕಂಪ್ಲೇಂಟ್/ಉಪ ಲೋಕ್/ಬಿಡಿ–8138/2015/ಸನಿಕಾಸ–1, ದಿನಾಂಕ: 21–04–2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 05–05–2017 ರವರ ಪತ್ರದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 9 ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕು ಕಸಬಾ ಹೋಬಳಿ ಚನ್ನಶೆಟ್ಟಿಹಳ್ಳಿಯ ನಿವಾಸಿಯಾದ ಶ್ರೀಮತಿ ಶಿವಮ್ಮ ಕೋಂ ಲೇ.ಹುಚ್ಚೇಗೌಡ (ಇನ್ನು ಮುಂದೆ ದೂರುದಾರರು ರಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಶ್ರೀ ಮಂಜುನಾಥ (ಪ್ರಸ್ತುತ ತಿಪಟೂರು ತಾಲ್ಲೂಕಿನ ಹಿಂಡಿಸಕೆರೆ) ಅಮ್ಮನಘಟ್ಟ ಗ್ರಾಮ ಪಂಚಾಯಿತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ, (ಇನ್ನು ಮುಂದೆ ಎದುರುದಾರರು ರಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9 ರಡಿಯಲ್ಲಿ ವಿಚಾರಣೆಗೆ ತೆಗೆದುಕೊಂಡಿದ್ದಿದೆ.

**ದೂರಿನ ಸಂಕ್ಷಿಪ್ತ ವಿವರಣೆ:–**

ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕು ಅಮ್ಮನಘಟ್ಟ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಬರುವ ಅಮ್ಮನಘಟ್ಟ ಗ್ರಾಮದ ಖಾತಾ ನಂ.46, 48, 150 ಮತ್ತು ಚನ್ನಶೆಟ್ಟಿ ಹಳ್ಳಿ ಗ್ರಾಮದ ಖಾತಾ ನಂ.175 ರಲ್ಲಿನ ವಿಸ್ತೀರ್ಣ 30/40 ಅಡಿಯುಳ್ಳ ನಿವೇಶನವಿದೆ, ದೂರುದಾರರ ಪತಿ ಸುಮಾರು 20 ವರ್ಷಗಳ ಹಿಂದೆ ಮರಣ ಹೊಂದಿದ್ದು, ಪಾವತಿ ಖತೆಯ ಆಧಾರದ ಮೇಲೆ ಖಾತಾ, ಮಹಣಿ ಮಾಡಲು ಎದುರುದಾರರಿಗೆ ಅರ್ಜಿ ಸಲ್ಲಿಸಿದ್ದು, ಎದುರುದಾರರು ಖಾತಾ ಬದಲಾವಣೆ ಮಾಡಿಕೊಳ್ಳುವುದಾಗಿ ಒಪ್ಪಿ, ಆ ನಂರ ಹೇರೂರು ಗ್ರಾಮದ ನಿವಾಸಿಯಾದ ಶ್ರೀ ಚನ್ನಬಸವಯ್ಯ ಆತನ ಪತ್ನಿ ಶ್ರೀಮತಿ ಚನ್ನಮ್ಮ, ಮಗಳು ಶ್ರೀಮತಿ ಗಂಗಾಂಭಿಕೆ ಹಾಗೂ ಅವರ ಪತಿ ಶ್ರೀ ಯೋಗೇಶ್ ರವರುಗಳು ಕೂಡಿ ಸದರಿ ಸ್ವತ್ತುಗಳನ್ನು ತಮ್ಮ ಹೆಸರಿಗೆ ಖಾತಾ ಬದಲಾವಣೆ ಮಾಡಿಸೊಕೊಳ್ಳಲು ಎದುರುದಾರರಿಗೆ ಹಣ ಕೊಟ್ಟು ಸಮ್ಮತಿ ಸೂಚಿಸಲು ಹಿಂಸೆ ನೀಡಿರುವುದಾಗಿ ಹೇಳಿದ್ದಾರೆ.

ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರು ದಿನಾಂಕ:20.02.2015 ರಮದು ತಮ್ಮ ಪತಿಯ ಹೆಸರಿನಲ್ಲಿರುವ ಸ್ವತ್ತುಗಳನ್ನು ಖಾತಾ ಮಾಡಿಕೊಡಬೇಕೆಂದು ಕೋರಿ ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ದಾಖಲೆಗಳನ್ನು ಪರಿಶೀಲಿಸಲಾಗಿ, ಸದರಿ ಸ್ವತ್ತುಗಳು ಗ್ರಾಮ ಠಾಣಾ ಆಸ್ತಿಗಳಾಗಿದ್ದು, ಸದರಿ ಸ್ವತ್ತುಗಳ ಖಾತಾ ಬದಲಾವಣೆ ಮಾಡಲು ಇ–ಸ್ವತ್ತು ತಂತ್ರಾಶಕ್ಕೆ ದಾಖಲೆಗಳನ್ನು ಒದಗಿಸಿಕೊಡಬೇಕೆಂದು ದೂರುದಾರರಿಗೆ ತಿಳಿಸಿದ್ದು, ದೂರುದಾರರು ಯಾವುದೇ ದಾಖಲೆಗಳನ್ನು ಹಾಜರುಪಡಿಸಿಲ್ಲ. ಅಲ್ಲದೇ ಸದರಿ ಸ್ವತ್ತಿನ ಅಕ್ಕ–ಪಕ್ಕದ ನಿವೇಶನದ ಮಾಲೀಕರನ್ನು ಹಾಜರುಪಡಿಸಿ, ಹೇಳಿಕೆ ನೀಡುವಂತೆ ದೂರುದಾರರಿಗೆ ತಿಳಿಸಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲ ಸ್ಥಳ ಪರಿಶೀಲನೆ ಮಾಡಿ, ಅಕ್ಕ–ಪಕ್ಕದ ಸ್ವತ್ತಿನ ಮಾಲೀಕರನ್ನು ಕೇಳಿಕೊಂಡರೂ ಸಹ ಯಾರೂ ಸಹ ಸಹಕಾರ ನೀಡಿಲ್ಲ. ದಿನಾಂಕ:29.05.2015 ರಂದು ತಹಶೀಲ್ದಾರ್, ಗುಬ್ಬಿ ರವರಿಗೆ ಅರ್ಜಿದಾರರು ನೀಡಿದ ದಾಖಲೆಗಳ ಮೇಲೆ ಖಾತಾ ಬದಲಾವಣೆ ಮಾಡಲು ನಮೂನೆ–9 ಮತ್ತು 11 ನ್ನು ನೀಡುವ ಬಗ್ಗೆ ಗ್ರಾಮ ಠಾಣಾ ಸರ್ವೆ ನಕ್ಷೆ ನೀಡಬೇಕೆಂದು ಅರ್ಜಿ ನೀಡಲಾಗಿದೆ. ಈ ಬಗ್ಗೆ ತಹಶೀಲ್ದಾರ್‌ರವರು ಯಾವುದೇ ಮಾಹಿತಿ ನೀಡಿಲ್ಲವೆಂದು ಹೇಳಿದ್ದಾರೆ.

ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ಎದುರುದಾರರ ಆಕ್ಷೇಪಣೆಯ ಅಂಶಗಳನ್ನು ಅಲ್ಲಗಳೆದು, ದೂರಿನಲ್ಲಿನ ಅಂಶಗಳನ್ನೇ ಪುನರುಚ್ಛರಿಸಿದ್ದಾರೆ.

**ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ :-**

ಸ್ವತ್ತಿನ ಸಂಖ್ಯೆ: 46, 48 ಮತ್ತು 150 ರ ಸ್ವತ್ತುಗಳು ಮೂಲತಃ ದೂರುದಾರರ ಪತಿ ಶ್ರೀ ಹುಚ್ಚೇಗೌಡ ಬಿನ್ ಪಟೇಲ್ ಸಿದ್ದೇಗೌಡ ರವರ ಹೆಸರಿನಲ್ಲಿ ನಮೂದಾಗಿದ್ದು, ಈ ಬಗ್ಗೆ ಎದುರುದಾರರ ಪಂಚಾಯಿತಿಯ ಡಿಮ್ಯಾಂಡ ವಹಿಯ ಪ್ರತಿಯಲ್ಲಿ ಸಮೂದಾಗಿದೆ. ಸ್ವತ್ತಿನ ಸಂಖ್ಯೆ: 46, 48 ಮತ್ತು 150 ರ ಸ್ವತ್ತುಗಳಿಗೆ ಸಂಬಂಧಪಟ್ಟಂತೆ ದೂರುದಾರರು ಖಾತಾ ಬದಲಾವಣೆ ಮಾಡಿಕೊಡುವಂತೆ ಎದುರುದಾರರಿಗೆ ಅರ್ಜಿ ಸಲ್ಲಿಸಿದ್ದು, ಎದುರುದಾರರು ಸದರಿ ಸ್ವತ್ತು ಗ್ರಾಮ ಠಾಣೆಗೆ ಸಂಬಂಧಿಸಿದ್ದರಿಂದ, ಖಾತಾ ಬದಲಾವಣೆ ಮಾಡಲು ನಮೂನೆ-9 ಮತ್ತು 11 ಕೋರಿ ಗುಬ್ಬಿ ತಹಶೀಲ್ದಾರ್‌ರವರಿಗೆ ಮನವಿ ಸಲ್ಲಿಸಿದ್ದಾಗಿ ಹೇಳಿದ್ದಾರೆ. ಆದರೆ, ಎದುರುದಾರರ ಕಛೇರಿಯ ದಾಖಲೆಗಳ ಪ್ರಕಾರ ಸದರಿ ಸ್ವತ್ತುಗಳು ದೂರುದಾರರ ಪತಿ ಶ್ರೀ ಹುಚ್ಚೇಗೌಡರ ಹೆಸರಿನಲ್ಲಿದ್ದು, ಸದರಿಯವರು ಮೃತಪಟ್ಟಿದ್ದು, ಪಾವತಿ ವಾರಸು ಆಧಾರದ ಮೇಲೆ ಸೂಕ್ತ ದಾಖಲೆಗಳನ್ನು ಪಡೆದು ದೂರುದಾರರ ಹೆಸರಿಗೆ ಕರ್ನಾಟಕ ಭೂ ಕಂದಾಯ ಅಧಿನಿಯಮ ಕಲಂ 128 ರಡಿ ಕ್ರಮ ಜರುಗಿಸಿ ಖಾತಾ ಬದಲಾವಣೆ ಮಾಡಬೇಕಾಗಿದೆ. ಸದರಿ ಸ್ವತ್ತು ಗ್ರಾಮ ಠಾಣಾ ಸ್ವತ್ತು ಎಂಬ ಬಗ್ಗೆ ಎದುರುದಾರರು ಯಾವುದೇ ದಾಖಲೆಗಳನ್ನು ಹಾಜರುಪಡಿಸಿಲ್ಲ. ಸದರಿ ಸ್ವತ್ತುಗಳು ಪ್ರಸ್ತುತ 2013-14 ನೇ ಸಾಲಿನಲ್ಲಿಯೂ ಸಹ ದೂರುದಾರರ ಪತಿಯ ಹೆಸರಿನಲ್ಲಿದ್ದು, ಸದರಿ ದಾಖಲೆಗಳ ಆಧಾರದ ಮೇಲೆ ದೂರುದಾರರ ಹೆಸರಿಗೆ ಖಾತಾ ಬದಲಾವಣೆ ಮಾಡದೇ, ತೊಂದರೆ ನೀಡಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ದಾಖಲಾತಿಗಳು ಹಾಗೂ ಎದುರುದಾರರ ಆಕ್ಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಅದಲ್ಲದೆ, ಎದುರುದಾರರು ಸರ್ಕಾರಿ ನೌಕರರಾಗಿದ್ದು, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1) ರಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಈಗ ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ, ಹಾಗೂ ಎದುರುದಾರರ ವಿರುದ್ಧದ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಾಮವಳಿ 1957 ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/437/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 02-06-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಮಂಜುನಾಥ (ಪ್ರಸ್ತುತ ತಿಪಟೂರು ತಾಲ್ಲೂಕಿನ ಹಿಂಡಿಸಕೆರೆ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಮ್ಮನಘಟ್ಟ ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ,</u>**

1. ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 40 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ.
6. ಶ್ರೀ ಮಂಜುನಾಥ (ಪ್ರಸ್ತುತ ತಿಪಟೂರು ತಾಲ್ಲೂಕಿನ ಹಿಂಡಿಸಕೆರೆ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಮ್ಮನಘಟ್ಟ ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.